ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನಾಲ್ಕನೇ ಅಧಿವೇಶನ**

**ಶುಕ್ರವಾರ, ದಿನಾಂಕ: ೦೯ನೇ ಫೆಬ್ರವರಿ, ೨೦೧೮**

---

## ಸಮೂಹ – V

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ಉನ್ನತ ಶಿಕ್ಷಣ ಸಚಿವರು

೪. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು

೫. ಸಾರಿಗೆ ಸಚಿವರು

೬. ಗಣಿ ಮತ್ತು ಭೂವಿಜ್ಞಾನ ಸಚಿವರು

೭. ಸಣ್ಣ ಕೈಗಾರಿಕೆ ಮತ್ತು ಸಕ್ಕರೆ ರಾಜ್ಯ ಸಚಿವರು

---

## ಚಿಕ್ಕಮಗಳೂರು ಜಿಲ್ಲೆಯ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೪೬ (೩೭೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯ ಕೆ.ಎಸ್.ಆರ್.ಟಿ.ಸಿ ಬಸ್ಸು ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆಯೇ ; ಹಾಗಿದ್ದಲ್ಲಿ ಯಾವ ಯಾವ ನಿಲ್ದಾಣಗಳಲ್ಲಿ ವ್ಯವಸ್ಥೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಜಿಲ್ಲೆಯ ಎಷ್ಟು ಕೆ.ಎಸ್.ಆರ್.ಟಿ.ಸಿ ಬಸ್ಸು ನಿಲ್ದಾಣಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕುಡಿಯುವ ನೀರಿನ ವ್ಯವಸ್ಥೆ ಮಾಡದಿರಲು ಕಾರಣವೇನು ; (ವಿವರ ನೀಡುವುದು)

(ಇ) ಅನೇಕ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣಗಳಲ್ಲಿ ಸ್ವಚ್ಛತೆಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಾದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಜಿಲ್ಲೆಯ ಕೆ.ಎಸ್.ಆರ್.ಟಿ.ಸಿ ಬಸ್ಸ್ ನಿಲ್ದಾಣದಲ್ಲಿ ಮದ್ಯಪಾನ ಮಾಡಿದವರು ಮತ್ತು ಭಿಕ್ಷುಕರ ಸಂಖ್ಯೆ ಹೆಚ್ಚಾಗಿ ಪ್ರಯಾಣಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಕುರಿತು

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು)**–

೪೭(೩೩೬) ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಯಾವ ವರ್ಷದವರೆಗೆ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ ; (ಪ್ರತಿಯೊಂದರ ಆದೇಶದ ಪ್ರತಿ ನೀಡುವುದು)

(ಆ) ಯಾವ ವರ್ಷದವರೆಗೆ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ವಿಧಿಸಿರುವ ಷರತ್ತುಗಳು ಹಾಗೂ ಅದಕ್ಕಿರುವ ನಿಯಮಾವಳಿಗಳೇನು ;

(ಈ) ಈ ನಿಯಮಾವಳಿಗಳ ಕಾರಣಕ್ಕಾಗಿ ಹುದ್ದೆ ಖಾಲಿ ಇದ್ದರೂ ಕೂಡ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗುತ್ತಿಲ್ಲ, ಇದರಿಂದ ಶಿಕ್ಷಣ ಸಂಸ್ಥೆಗಳಿಗೆ ಅಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮಸ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಉ) ಶಿಕ್ಷಕ ಹಾಗೂ ಪದವೀಧರರ ಮತ ಕ್ಷೇತ್ರದ ವಿಧಾನ ಪರಿಷತ್ತಿನ ಸದಸ್ಯರು ಹೋರಾಟ ಮಾಡಿದ ಹಿನ್ನೆಲೆಯಲ್ಲಿ ಈ ನೇಮಕಾತಿಗಾಗಿ ವಿಧಿಸಿರುವ ಷರತ್ತುಗಳನ್ನು ಸಡಿಲಿಸಲು, ಸರಳೀಕೃತಗೊಳಿಸಲು ಒಪ್ಪಿಕೊಳ್ಳಲಾಗಿತ್ತೇ ;ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಉದ್ಯೋಗ ಖಾತ್ರಿ ಯೋಜನೆಯ ಅಕ್ರಮಗಳ ಕುರಿತು.

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)**–

೪೮(೩೯೩) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗ್ರಾಮೀಣ ಭಾಗದ ಬಡವರಿಗೆ ಉದ್ಯೋಗ ಒದಗಿಸುವ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಅವ್ಯವಹಾರ ಅಕ್ರಮಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಆ) ಬಂದಿದ್ದಲ್ಲಿ ಕಳೆದ ೪ ವರ್ಷಗಳಿಂದ ಯಾವ ಯಾವ ಜಿಲ್ಲೆಗಳಲ್ಲಿ ಅವ್ಯವಹಾರದ ಪ್ರಕರಣಗಳು ದಾಖಲಾಗಿವೆ ; ಇವುಗಳ ತನಿಖೆ/ವಿಚಾರಣೆಯನ್ನು ಕೈಗೆತ್ತಿಕೊಳ್ಳಲಾಗಿದೆಯೇ ; ಇವುಗಳಲ್ಲಿ ಸಾಬೀತಾಗಿರುವ ಪ್ರಕರಣಗಳೆಷ್ಟು :

(ಇ) ನರೇಗಾ ಅಕ್ರಮಕ್ಕೆ ಸಂಬಂಧಪಟ್ಟಂತೆ ಕಳೆದ ೪ ವರ್ಷಗಳಿಂದ ಯಾವ ಜಿಲ್ಲೆಯಿಂದ ಎಷ್ಟು ವಸೂಲಿ ಮಾಡಲಾಗಿದೆ, ವಸೂಲಿಗೆ ಬಾಕಿ ಇರುವ ಪ್ರಕರಣಗಳೆಷ್ಟು ;

(ಈ) ಇವುಗಳಲ್ಲಿ ಕಾಮಗಾರಿ ನಡೆಸದೇ ಹಣ ಮಂಜೂರಾತಿ ಹಾಗೂ ಕಾಮಗಾರಿ ಮೊತ್ತಕ್ಕಿಂತ ಹೆಚ್ಚು ಹಣ ಬಳಕೆ ಮಾಡಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು) ಈ ರೀತಿಯ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ
## ರಾಜ್ಯಕ್ಕೆ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೪೯(೩೮೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಕಳೆದ ೫ ವರ್ಷಗಳಲ್ಲಿ ರಾಜ್ಯಕ್ಕೆ ಬಿಡುಗಡೆಯಾಗಿರುವ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನದಲ್ಲಿ ನೀಡಿದ ಕೂಲಿ ವೆಚ್ಚ ಹಾಗೂ ಸಾಮಾಗ್ರಿಗಳ ವೆಚ್ಚದ ಸಂಪೂರ್ಣ ವಿವರ ನೀಡುವುದು ;

(ಆ) ಈ ಯೋಜನೆಯಡಿಯಲ್ಲಿ ಬಿಡುಗಡೆಯಾದ ಅನುದಾನದಲ್ಲಿ ಕೇವಲ ಕೂಲಿ ವೆಚ್ಚ ನೀಡಿ, ಸಾಮಾಗ್ರಿಗಳ ವೆಚ್ಚವನ್ನು ಸಂದಾಯ ಮಾಡುತ್ತಿಲ್ಲವೆಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೫ ವರ್ಷಗಳ ಅವಧಿಯಲ್ಲಿ ಬಾಕಿ ಇರುವ ಸಾಮಾಗ್ರಿಗಳ ಮೊತ್ತ ಎಷ್ಟು ; ಇವುಗಳ ಸಂದಾಯಕ್ಕಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ಅಲ್ಪಸಂಖ್ಯಾತರ ಶಾದಿಭಾಗ್ಯ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೫೦(೪೦೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರದ ಮಹತ್ವಕಾಂಕ್ಷಿ "ಶಾದಿಭಾಗ್ಯ" ಯೋಜನೆಯ ನೆರವು ಪಡೆಯಲು ಬಂದ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಅದರಲ್ಲಿ ಎಷ್ಟು ಫಲಾನುಭವಿಗಳಿಗೆ ಸರ್ಕಾರದ ಶಾದಿಭಾಗ್ಯ ಯೋಜನೆ ಲಭಿಸಿದೆ ; ಬಾಕಿ ಸರದಿಯಲ್ಲಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಶಾದಿಭಾಗ್ಯ ಫಲಾನುಭವಿಗಳಿಗೆ ಸರ್ಕಾರದಿಂದ ಲಭಿಸುತ್ತಿರುವ ಪ್ರೋತ್ಸಾಹ ಧನವೆಷ್ಟು ;

(ಈ) ಕಳೆದ ಆರ್ಥಿಕ ವರ್ಷದಲ್ಲಿ ಶಾದಿಭಾಗ್ಯ ಯೋಜನೆಗೆ ಆಯವ್ಯಯದಲ್ಲಿ ಮೀಸಲಿಟ್ಟ ಅನುದಾನವೆಷ್ಟು ;

(ಉ) ಜಿ.ಎಸ್.ಟಿ ಜಾರಿ ಹಿನ್ನೆಲೆಯಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿರುವುದರಿಂದ ಯೋಜನೆಯ ಮೊತ್ತ ಹೆಚ್ಚಿಸಬೇಕು ಎಂಬ ಬೇಡಿಕೆ ಬಂದಿರುವುದು ನಿಜವೇ; ನಿಜವಾಗಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಮಂಡ್ಯ ಜಿಲ್ಲೆಯ ಸರ್ಕಾರಿ ಶಾಲಾ ಕೊಠಡಿಗಳ ಶಿಥಿಲಾವಸ್ಥೆಯ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)–**

೫೧(೩೯೯) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ ಎಷ್ಟು ;

(ಆ) ಜಿಲ್ಲೆಯ ಸರ್ಕಾರಿ ಶಾಲೆಗಳಲ್ಲಿ ಶಿಥಿಲಾವಸ್ಥೆ ತಲುಪಿರುವ ಕೊಠಡಿಗಳ ಸಂಖ್ಯೆ ಎಷ್ಟು ಮತ್ತು ಶಾಲೆಯಲ್ಲಿ ಕೊರತೆ ಇರುವ ಕೊಠಡಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಬಳಕೆಗೆ ಯೋಗ್ಯವಲ್ಲದ ಕೊಠಡಿಗಳನ್ನು ನೆಲಸಮ ಮಾಡದಿರುವುದರಿಂದ ಶಾಲಾ ಮಕ್ಕಳು ಮತ್ತು ಸಿಬ್ಬಂದಿಗಳು ಅಪಾಯಕರ ವಾತಾವರಣದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವಾಗ ಈ ಶಿಥಿಲಾವಸ್ಥೆಯ ಕಟ್ಟಡಗಳನ್ನು ನೆಲಸಮ ಮಾಡಲಾಗುವುದು ;

(ಉ) ಶಾಲೆಗಳಲ್ಲಿ ಕೊರತೆಯಿರುವ ಕೊಠಡಿಗಳನ್ನು ನೂತನವಾಗಿ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಟ್ರಕ್–ಟರ್ಮಿನಲ್ ಯೋಜನೆಗಳ ಕುರಿತು

**ಡಾ. ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು)–**

೫೨(೩೦೯) ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಸರಕು ಸಾಗಾಣಿಕೆ ವಾಹನಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ವಾಹನಗಳ ನಿಲುಗಡೆಗೆ ಟ್ರಕ್–ಟರ್ಮಿನಲ್ ನಿರ್ಮಿಸಿ, ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲಾಗಿದೆಯೇ ;

(ಇ) ಡಿ. ದೇವರಾಜ ಅರಸ್ ಟ್ರಕ್–ಟರ್ಮಿನಲ್ ಲಿ., ಸಂಸ್ಥೆಯು ಕಳೆದ ೩ ವರ್ಷಗಳಲ್ಲಿ ಕೈಗೊಂಡ ಟ್ರಕ್–ಟರ್ಮಿನಲ್ ಯೋಜನೆಗಳ ವಿವರ ನೀಡುವುದು ;

(ಈ) ಕಳೆದ ೩ ವರ್ಷಗಳಲ್ಲಿ ಸರ್ಕಾರವು ಈ ಯೋಜನೆಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಉ) ಪ್ರಸಕ್ತ ಸರಕು–ಸಾಗಾಣಿಕೆ ವಾಹನಗಳ ನಿಲುಗಡೆ ಮತ್ತು ಚಾಲಕರ ತಂಗುವಿಕೆಗಾಗಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಟ್ರಕ್–ಟರ್ಮಿನಲ್ ನಿರ್ಮಿಸಲು ಜಮೀನನ್ನು ಖರೀದಿಸಲಾಗಿದೆಯೇ ;

(ಊ) ಟ್ರಕ್–ಟರ್ಮಿನಲ್ ಕಾಮಗಾರಿ ಯೋಜನೆಗಳನ್ನು ಕೈಗೊಳ್ಳಲು ಆಯವ್ಯಯದಲ್ಲಿ ವಾರ್ಷಿಕ ಅಗತ್ಯವಿರುವ ಅನುದಾನ ಒದಗಿಸಲಾಗಿದೆಯೇ ;

## ಹಾವೇರಿ ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಬಂದ ಅನುದಾನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೫೩(೪೨೧) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩-೧೪ ರಿಂದ ೨೦೧೭-೧೮ನೇ ಸಾಲಿನವರೆಗೆ ಹಾವೇರಿ ಜಿಲ್ಲೆಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಗೆ ಯಾವ ಯಾವ ಯೋಜನೆಗಳಡಿಯಲ್ಲಿ ಯಾವ ಯಾವ ಕಾಮಗಾರಿಗಳಿಗೆ ಯಾವ ಯಾವ ಮೂಲಸೌಕರ್ಯಕ್ಕಾಗಿ ಎಷ್ಟೆಷ್ಟು ಅನುದಾನ ಬಂದಿದೆ : (ವರ್ಷವಾರು ಯೋಜನಾವಾರು, ತಾಲ್ಲೂಕುವಾರು ಕಾಮಗಾರಿಗಳ ಮೂಲಭೂತ ಸೌಕರ್ಯವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಎಷ್ಟು ಕಾಮಗಾರಿಗಳು ಮತ್ತು ಮೂಲಭೂತ ಸೌಕರ್ಯಗಳು ಪೂರ್ಣಗೊಂಡಿವೆ ; ಚಾಲ್ತಿಯಲ್ಲಿರುವ ಕಾಮಗಾರಿಗಳು ಯಾವುವು :ಬಾಕಿ ಇರುವ ಕಾಮಗಾರಿಗಳು ಹಾಗೂ ಮೂಲಭೂತ ಸೌಕರ್ಯಗಳು ಎಷ್ಟು ; (ವರ್ಷವಾರು, ತಾಲ್ಲೂಕುವಾರು, ಯೋಜನೆವಾರು ಮೂಲಭೂತ ಸೌಕರ್ಯಗಳವಾರು ಸಂಪೂರ್ಣ ವಿವರ ನೀಡುವುದು ; ಹಾಗೂ ಶಿಗ್ಗಾಂವ್ ವಿಧಾನ ಸಭಾ ಕ್ಷೇತ್ರದ ಪ್ರತ್ಯೇಕ ವಿವರ ನೀಡುವುದು)

(ಇ) ಹಾವೇರಿ ಜಿಲ್ಲೆಯ ಶಿಗ್ಗಾಂವ್-ಸವಣೂರು ಮತ ಕ್ಷೇತ್ರದಲ್ಲಿ ಒಟ್ಟು ಎಷ್ಟು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಇವೆ ; ಕೊಠಡಿಗಳಿವೆ ; ಇವುಗಳಲ್ಲಿ ಶಿಥಿಲಗೊಂಡ ಕಟ್ಟಡಗಳೆಷ್ಟು : ನೆಲಸಮ ಮಾಡಿದ ಕಟ್ಟಡಗಳೆಷ್ಟು : ಹೊಸದಾಗಿ ಕಟ್ಟಿದ ಕೊಠಡಿಗಳೆಷ್ಟು ;ಇವುಗಳಿಗೆ ಬಂದ ಅನುದಾನ ಎಷ್ಟು ; ಖರ್ಚಾದ ಅನುದಾನ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಹಾವೇರಿ ಜಿಲ್ಲೆಯ ಶಿಗ್ಗಾಂವ್-ಸವಣೂರು ಮತ ಕ್ಷೇತ್ರದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಪಠ್ಯಪುಸ್ತಕ ಮತ್ತು ಸಮವಸ್ತ್ರ ವಿತರಣೆಗೆ ಖರ್ಚು ಮಾಡಿದ ಅನುದಾನ ಎಷ್ಟು ; ಈ ಶಾಲೆಗಳ ಪೈಕಿ ಶೌಚಾಲಯಗಳಿರುವ ಶಾಲೆಗಳೆಷ್ಟು ; ಇಲ್ಲದಿರುವ ಶಾಲೆಗಳೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕೊರತೆ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)–**

೫೪(೨೯೯) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿನ ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ :

(ಆ) ಹಾಗಿದ್ದಲ್ಲಿ, ಯಾವ್ಯಾವ ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕೊರತೆ ಇದೆ :

(ಇ) ಗ್ರಾಮ ಪಂಚಾಯಿತಿಗಳಿಗೆ ಪಿ.ಡಿ.ಓ. ಗಳನ್ನು ನಿಯೋಜನೆ ಮಾಡುವ ಅಧಿಕಾರವು ಜಿಲ್ಲಾ ಪಂಚಾಯಿತಿಗೆ ಇದೆಯೇ : ಹಾಗಾದರೆ ಯಾವ್ಯಾವ ಗ್ರಾಮ ಪಂಚಾಯಿತಿಗಳಿಂದ ಯಾವ್ಯಾವ ಗ್ರಾಮ ಪಂಚಾಯಿತಿಗಳಿಗೆ ನಿಯೋಜನೆ ಮಾಡಲಾಗಿದೆ : ನಿಯೋಜನೆ ಮಾಡಲಾಗಿರುವ ಪಿ.ಡಿ.ಓ.ಗಳಿಗೆ ಎಷ್ಟೆಷ್ಟು ಗ್ರಾಮ ಪಂಚಾಯಿತಿಗಳ ಜವಾಬ್ದಾರಿಯನ್ನು ವಹಿಸಲಾಗಿದೆ : (ಪೂರ್ಣ ಮಾಹಿತಿ ನೀಡುವುದು)

(ಈ) ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕೊರತೆಯನ್ನು ನೀಗಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು : ಯಾವ ಕಾಲಮಿತಿಯಲ್ಲಿ ಎಲ್ಲಾ ಪಂಚಾಯಿತಿಗಳಿಗೆ ಪಿ.ಡಿ.ಓ.ಗಳನ್ನು ನೇಮಕ ಮಾಡಲಾಗುವುದು ?

## ಖಾಸಗಿ ಹಾಗೂ ಮಿಷನರಿ ಶಾಲೆಗಳಲ್ಲಿ ಶಾಲಾ ಶುಲ್ಕ ವಿಳಂಬವಾದಲ್ಲಿ ದಂಡ ವಿಧಿಸುತ್ತಿರುವ ಬಗ್ಗೆ

**ಶ್ರೀ ಪಿ. ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು)–**

೫೫(೩೧೦) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಖಾಸಗಿ/ಮಿಷನರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಪ್ರತಿ ವರ್ಷ ಶಾಲಾ ಶುಲ್ಕವನ್ನು ಹೆಚ್ಚಿಸುವುದಲ್ಲದೇ, ಶಾಲಾ ಶುಲ್ಕವನ್ನು ಪಾವತಿಸಲು ಕೊನೆಯ ದಿನಾಂಕವನ್ನು ಅವರೇ ನಿಗದಿಪಡಿಸುತ್ತಿದ್ದು ಒಂದು ವೇಳೆ ನಿಗದಿತ ದಿನಾಂಕದೊಳಗೆ ಪಾವತಿಸದಿದ್ದಲ್ಲಿ ಮಾಹೆಗೆ (ತಿಂಗಳಿಗೆ) ರೂ. ೩೦೦/–, ೫೦೦/–, ೧೦೦೦/–ಗಳಂತೆ ದಂಡವನ್ನು ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಶಾಲಾ ಶುಲ್ಕವನ್ನು ಹೆಚ್ಚಿಸಲು ಸರ್ಕಾರದಿಂದ ಯಾವುದಾದರೂ ಅನುಪಾತವಿದೆಯೇ ; ಅನುಪಾತವಿದ್ದಲ್ಲಿ, ಮಾಹಿತಿ ಒದಗಿಸುವುದು ;

(ಇ) ಶಾಲಾ ಶುಲ್ಕ ಹೆಚ್ಚಿಸಿರುವುದಲ್ಲದೆ ದಂಡವನ್ನು ಪಾವತಿಸಲು ಭಾರತ/ ಕರ್ನಾಟಕದ ಶಿಕ್ಷಣ ಕಾಯ್ದೆಯಲ್ಲಿ ಯಾವುದಾದರೂ ನಿಯಮವಿದೆಯೇ ; ಇದ್ದಲ್ಲಿ, ಮಾಹಿತಿ ಒದಗಿಸುವುದು ;

(ಈ) ಇದುವರೆವಿಗೂ ಯಾವುದಾದರೂ ದಂಡ ವಿಧಿಸುತ್ತಿರುವ ಬಗ್ಗೆ ದೂರುಗಳು ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ಮಾಹಿತಿ ಒದಗಿಸುವುದು)

(ಉ) ಮನಸೊಇಚ್ಛೆ ಶುಲ್ಕ ಹೆಚ್ಚಿಸುವ ಹಾಗೂ ದಂಡ ವಿಧಿಸುವ ಖಾಸಗಿ/ ಮಿಷನರಿ ಶಾಲೆಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕರ್ನಾಟಕ ಸರ್ಕಾರದಿಂದ ಎನ್.ಸಿ.ಇ.ಆರ್.ಟಿ. ಅಡಿಯಲ್ಲಿ ಪಠ್ಯ ಪುಸ್ತಕಗಳ ಪರಿಷ್ಕರಣೆ ಕುರಿತು

**ಶ್ರೀಮತಿ ತಾರಾಅನೂರಾಧ** (ನಾಮನಿರ್ದೇಶನ ಹೊಂದಿದವರು) –

೫೬ (೪೬೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೭–೧೮ನೇ ಸಾಲಿನ ಕರ್ನಾಟಕ ಸರ್ಕಾರದಿಂದ ಪರಿಷ್ಕರಣೆಗೊಂಡ ಪಠ್ಯ ಪುಸ್ತಕಗಳನ್ನು ಎನ್.ಸಿ.ಇ.ಆರ್.ಟಿ. ಪರಿಶೀಲನೆ ನಡೆಸಿದೆಯೇ ;

(ಆ) ಅವರು ನೀಡಿರುವ ವರದಿ ಏನು : ವರದಿಯ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮ ಏನು :

(ಇ) ೨೦೧೭-೧೮ನೇ ಸಾಲಿನಲ್ಲಿ ಸರ್ಕಾರ ಮುದ್ರಿಸಿದ ಪಠ್ಯ ಪುಸ್ತಕಗಳಲ್ಲಿ ಇರುವ ಲೋಪದೋಷಗಳನ್ನು ನ್ಯೂನ್ಯತೆಗಳನ್ನು ಸರಿಪಡಿಸಿ ಬೋಧಿಸಲು ಹೊರಡಿಸಿರುವ ಎಷ್ಟು ಪುಟಗಳ ತಿದ್ದೋಲೆ ನೀಡಲಾಗಿದೆ : (ಪ್ರತಿ ನೀಡುವುದು) ಇವುಗಳನ್ನು ಸರಿಪಡಿಸಲು ತೆಗೆದುಕೊಂಡ ಕ್ರಮ ಏನು :

(ಈ) ಇಷ್ಟೊಂದು ತಪ್ಪುಗಳು ಆಗಲು ಕಾರಣಕರ್ತರು ಯಾರು : ಅವರ ಮೇಲೆ ತೆಗೆದುಕೊಂಡ ಕ್ರಮ ಏನು :

ಉ) ಪರಿಷ್ಕರಣಾ ಸಮಿತಿಗೆ ನೀಡಲಾಗಿರುವ ಸೌಲಭ್ಯಗಳು ಹಾಗೂ ಆ ಸಮಿತಿ ಇದುವರೆಗೆ ಖರ್ಚು ಮಾಡಿದ ಹಣವೆಷ್ಟು : (ವಿವರ ನೀಡುವುದು) ಆ ಸಮಿತಿ ಒಟ್ಟು ಎಷ್ಟು ಸಭೆಗಳನ್ನು ನಡೆಸಿದೆ ? (ಎಲ್ಲಾ ಸಮಿತಿಗಳ ನಡವಳಿಯನ್ನು ಒದಗಿಸುವುದು)

## ರಾಜ್ಯದ ಜಿಲ್ಲಾ ಪಂಚಾಯಿತಿಗಳಲ್ಲಿ ಖಾಲಿಯಿರುವ ಹುದ್ದೆಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೭ (೩೬೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಜಿಲ್ಲಾ ಪಂಚಾಯಿತಿಗಳಲ್ಲಿ (ಪ್ರಸ್ತುತ ಮಾಹೆವರೆಗೆ) ಖಾಲಿಯಿರುವ ಅಧಿಕಾರಿಗಳ ಹುದ್ದೆಗಳಾವುವು : (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿನ ಜಿಲ್ಲಾ ಪಂಚಾಯಿತಿಯಲ್ಲಿ ಉಪ ಕಾರ್ಯದರ್ಶಿ, ಮುಖ್ಯಯೋಜನಾಧಿಕಾರಿ, ಮುಖ್ಯಲೆಕ್ಕಾಧಿಕಾರಿ, ಯೋಜನಾ ಅಂದಾಜು ಮತ್ತು ಮೌಲ್ಯಮಾಪನ ಅಧಿಕಾರಿ, ಸಹಾಯಕ ಯೋಜನಾಧಿಕಾರಿ (ಡಿಆರ್‌ಡಿಎ ಕೋಶ) ಹುದ್ದೆಗಳು ಹಲವು ವರ್ಷಗಳಿಂದ ಖಾಲಿಯಿರುವ ಮಾಹಿತಿ ಸರ್ಕಾರದ ಗಮನಕ್ಕೆ ಬಂದಿದೆಯೇ :

(ಇ) ಬಂದಿದ್ದಲ್ಲಿ, ಸದರಿ ಹುದ್ದೆಗಳನ್ನು ತುಂಬಲು ಸರ್ಕಾರ ಯಾವುದೇ ಕ್ರಮವಹಿಸದಿರಲು ಕಾರಣವೇನು ; ಇದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ನಿಗಧಿತ ಸಮಯದೊಳಗೆ ಹುದ್ದೆಗಳನ್ನು ತುಂಬಲಾಗುವುದು ? (ಮಾಹಿತಿ ನೀಡುವುದು)

## ರಾಜ್ಯದ ಖಾಸಗಿ ಅನುದಾನಿತ / ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಮಾನ್ಯತೆ ನವೀಕರಣ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) –**

೫೮ (೩೦೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಖಾಸಗಿ ಅನುದಾನಿತ/ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಮಾನ್ಯತೆಯನ್ನು ೨೦೧೧ ರಿಂದ ನವೀಕರಣಗೊಳಿಸಿ ಆದೇಶ ಹೊರಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇಂತಹ ಎಷ್ಟು ಅನುದಾನಿತ/ಅನುದಾನ ರಹಿತ ಕಾಲೇಜುಗಳ ಮಾನ್ಯತೆಯನ್ನು ನವೀಕರಿಸಬೇಕಾಗಿದೆ ; (ವಿವರ ನೀಡುವುದು)

(ಆ) ಮಾನ್ಯತೆ ನವೀಕರಣ ವಿಳಂಬವಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ಮತ್ತು ಹೊಣೆಗಾರರು ಯಾರು ? (ವಿವರ ನೀಡುವುದು)

## ೧೯೮೭ ರಿಂದ ೧೯೯೫ರ ವರೆಗೆ ಪ್ರಾರಂಭವಾಗಿರುವ ಖಾಸಗಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸಲು ವಿಳಂಬವಾಗುತ್ತಿರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೫೯ (೩೮೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೧೯೮೭ ರಿಂದ ೧೯೯೫ರ ವರೆಗೆ ಪ್ರಾರಂಭವಾಗಿ, ವೇತನಾನುದಾನಕ್ಕೆ ಒಳಪಡಿಸುವಂತೆ ಸರ್ಕಾರಕ್ಕೆ ಕೋರಿರುವ ರಾಜ್ಯದ ಖಾಸಗಿ ಪ್ರಾಥಮಿಕ, ಪ್ರೌಢ, ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು : (ಜಿಲ್ಲಾವಾರು ಒಟ್ಟು ಸಂಖ್ಯೆಯ ವಿವರ ನೀಡುವುದು)

(ಆ) ಕೋರಿರುವ ಶಾಲಾ ಕಾಲೇಜುಗಳಲ್ಲಿ ಎಷ್ಟು ವಿದ್ಯಾಲಯಗಳನ್ನು ವೇತನಾನುದಾನಕ್ಕೆ ಒಳಪಡಿಸಲಾಗಿದೆ : (ಸಂಕ್ಷಿಪ್ತ ವಿವರ ನೀಡುವುದು)

(ಇ) ಇದುವರೆವಿಗೂ ಕೋರಿಕೆಯ ಕಡತವನ್ನು ವಿಲೇವಾರಿ ಮಾಡದೆ ಅನುದಾನಕ್ಕೆ ಒಳಪಡಿಸದೇ ಇರುವ ವಿದ್ಯಾಲಯಗಳು ಯಾವುವು : ಎಷ್ಟು ವರ್ಷಗಳಿಂದ ಕಡತಗಳು ವಿಲೇವಾರಿಯಾಗದೆ ಉಳಿದಿವೆ ? (ಜಿಲ್ಲಾವಾರು ಒಟ್ಟು ಸಂಖ್ಯೆಯ ವಿವರ ನೀಡುವುದು)

## ಕಾಲ್ಪನಿಕ ವೇತನ ಸಮಸ್ಯೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ) –**

೬೦ (೪೧೩) ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾಲ್ಪನಿಕ ವೇತನ ಬಡ್ತಿ ಜಾರಿಗೊಳಿಸುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು :

(ಆ) ಈ ಕುರಿತು ಶಾಸಕರ ಸಮಿತಿ ಕೊಟ್ಟಿರುವ ವರದಿಯ ಅಂಶಗಳು ಯಾವುವು : (ಪ್ರತಿಯನ್ನು ನೀಡುವುದು)

(ಇ) ಸೇವೆಗೆ ಸೇರಿದ ದಿನಾಂಕ, ಅನುದಾನಕ್ಕೆ ಒಳಪಟ್ಟ ದಿನಾಂಕ ಪರಿಗಣಿಸಿ ಸರ್ಕಾರ ಯಾವ ಯಾವ ಸೇವಾ ಸೌಲಭ್ಯಗಳನ್ನು ಯಾವ ಕಾಲಮಿತಿಯೊಳಗೆ ಒದಗಿಸಿಕೊಡಲಾಗುವುದು?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು. ಕಾ.ಸೂ. ಪ್ರತಿಗಳು 1500 – ಪಿ8